**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ**

**ಓ.ಎಸ್. ನಂಃ 329/2023**

**ಪಿಡಬ್ಲ್ಯೂ - 2**

**ಸಾಕ್ಷಿಯು ದಿಃ 17.03.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ : ವಾದಿ ಪರ ವಕೀಲರಿಂದ**

ನಾನು ವಾದಿಪರ ಸಾಕ್ಷಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿ ಇರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ. ನಾನು ಈ ಕೆಳಕಂಡ ದಾಖಲಾತಿಗಳನ್ನು ಹಾಜರು ಮಾಡಿರುತ್ತೇನೆ. ಅವುಗಳನ್ನು ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ.

2. ದಿನಾಂಕ 15.03.1999ರ ನೊಂದಾಯಿತ ಮರಣ ಶಾಸನ ಪತ್ರವನ್ನು ಹಾಜರುಪಡಿಸಿರುತ್ತೇನೆ, ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ನಿಪಿ 5 ಎಂದು, ಸದರಿ ಮರಣ ಪ್ರಮಾಣ ಪತ್ರವನ್ನು ನಾನೇ ಸಿದ್ಧಪಡಿಸಿರುತ್ತೇನೆ ಎಂದು ಸಾಕ್ಷಿಯು 2ನೇ ಪುಟದಲ್ಲಿರುವ ಕೊನೆಯಲ್ಲಿರುವ ಪತ್ರಗಾರರು ಎಂಬುವ ಸಹಿ ತನ್ನದು ಎಂದು ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿಪಿ 5(ಎ) ಎಂದು ಗುರ್ತಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಸಮಯ ಕೋರಿದ್ದು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ